# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ 07 ಬ್ಯಾಟರಾಯನಪುರ ವಾರ್ಡ್ ಸಮಿತಿ ಸಭೆಯ ನಡವಳಿ.

ದಿನಾಂಕ **01.10.2021** ರಂದು ವಾರ್ಡ್ ಕಛೇರಿಯಲ್ಲಿ ಬೆಳ್ಳಿಗೆ **11.00** ಕ್ಕೆ ನೋಡಲ್ ಅಧಿಕಾರಿಗಳ ಸಮಕ್ಷಮದಲ್ಲಿ ಸಭೆಯನ್ನು ಹಮ್ಮಿಕೊಳ್ಳಲಾಯಿತು. ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ವಾರ್ಡ್ ನಂ.07, ಬ್ಯಾಟರಾಯನಪುರ ವಾರ್ಡ್‌ಗೆ ಮಾನ್ಯ ಆಯುಕ್ತರ ಆದೇಶದಂತೆ ನೋಡಲ್ ಅಧಿಕಾರಿಯಾಗಿ ನಿಯೋಜಿಸಲಾಗಿರುವ ಶ್ರೀ.ಪ್ರಕಾಶ್.ಜಿ ರವರು ಸಭೆಯಲ್ಲಿ ಹಾಜರಿದ್ದು, ಈ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಗಮನ ಹರಿಸಿ, ಕೈಗೊಂಡ ಕ್ರಮದ ಬಗ್ಗೆ ಚರ್ಚಿಸಲಾಯಿತು.

1. **ಘನತ್ಯಾಜ್ಯ ನಿರ್ವಹಣೆ:**
   1. ಘಣತ್ಯಾಜ್ಯಾ ನಿರ್ವಹಣೆಗೆ ಸಂಭಂದಿಸಿದಂತೆ, ಮುಂದಿನ ಸಭೆಗೆ ಖುದ್ದು, ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ನಿ) ಹಾಜರಾಗಿ,ಕಸದ ಸಮಸ್ಯೆಯ ಬಗ್ಗೆ ಮಾಹಿತಿನೀಡಿಬೇಕೆಂದು ಕೋರಲಾಗಿತ್ತು. ಅದರಂತೆ ಇಂದಿನ ಸಭೆಗೆ ಘಣತ್ಯಾಜ್ಯ ನಿರ್ವಹಣೆ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು (ಪ್ರಭಾರ) ಯಾರು ಹಾಜರಾಗಿ, ಸದರಿ ಗುತ್ತಿದಾರರ ಕುರಿತು ಮಾಹಿತಿಯನ್ನು ನೀಡಿರುತ್ತಾರೆ. ಸದರಿ ಗುತ್ತಿಗೆದಾರರ ಬಗ್ಗೆ ವಿಚಾರಣೆ ನಡೆಸಿ, ಸೂಕ್ತ ಕ್ರಮ ಕೈಗೊಳ್ಳಲು, ನ್ಯಾಯಾಲಯವು ಆದೇಶಿಸಿರುವ ಬಗ್ಗೆ ಮಾಹಿತಿಯನ್ನು ನೀಡಿರುತ್ತಾರೆ.
   2. ವಾರ್ಡ್ ಕಛೇರಿಯ ಆವರಣದಲ್ಲಿ, ನಿಲ್ಲಿಸಲಾಗಿರುವ ಪಾಲಿಕೆ ಕಾಂಪ್ಯಾಕ್ಟರ್ ಮತ್ತು ಟ್ರಾಕ್ಟರ್ ವಾಹನವನ್ನು ಕೂಡಲೇ ದುರಸ್ಥಿಗೊಳಿಸಬೇಕೆಂದು ಸೂಚಿಸಲಾಯಿತು.
2. **ಆರೋಗ್ಯ ಇಲಾಖೆ:**
   1. ಕೋವಿಡ್ 3ನೇ ಅಲೆ ಹರಡುವ ಸಾಧ್ಯತೆಯಿದ್ದು, ಕೋವಿಡ್ ಸೋಂಕಿನ ಬಗ್ಗೆ ಎಚ್ಚರವಹಿಸಲು ಅಧಿಕಾರಿಗಳು ಸಮಿತಿ ಸದಸ್ಯರಿಗೆ ಮನದಟ್ಟು ಮಾಡಿರುತ್ತಾರೆ.
   2. ವಸತಿ ಸಮುಚ್ಚಯಗಳಲ್ಲಿ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಪರಿಶೀಲಿಸಲು ನಿಯಮಿತ ತಪಾಸಣೆಯನ್ನು ಕೈಗೊಳ್ಳುವುದು.
   3. ಅಂಗಡಿಗಳ ಮಾಲೀಕರು ವ್ಯಾಪಾರ ಪರವಾನಿಗೆಯನ್ನು ಪಡೆಯದೇ ವ್ಯಾಪಾರ ಮಾಡುತ್ತಿರುವುವರ ವಿರುದ್ಧ ಕ್ರಮಕೈಗೊಳ್ಳುವುದು.
   4. ಪ್ಲಾಸ್ಟಿಕ್ ಬಳಕೆ ನಿಷೇದದ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮುಡಿಸಿ ಮತ್ತು ಅಂಗಡಿಗಳಲ್ಲಿ ಪ್ಲಾಸ್ಟಿಕ್ ಬಳಕೆ ಕಂಡುಬಂದಲ್ಲಿ ಪ್ಲಾಸ್ಟಿಕ್ ಸೀಜ್ ಮಾಡುವ ಕೆಲಸವನ್ನು ವ್ಯಾಪಕವಾಗಿ ನಿರ್ವಹಿಸುವುದು.

3. ಕಾಮಗಾರಿ ವಿಭಾಗ:

1. 2021-22 ನೇ ಸಾಲಿನ ಅನುದಾನದಲ್ಲಿ ಕಾಯ್ದಿರಿಸಲಾಗಿರುವ POW ಮತ್ತು ವಿವಿಧ ಪಿಕೋಡ್ ರಡಿಯಲ್ಲಿ ಪರಿಗಣಿಸಬೇಕಾದ ಕಾಮಗಾರಿಗಳ ಬಗ್ಗೆ ವಾರ್ಡ್ ಸಮಿತಿ ಸಭೆಯಲ್ಲಿ ಚರ್ಚಿಸಿ ಅನುಮೋದನೆ ಪಡೆಯಬೇಕೆಂದು ಸೂಚಿಸಲಾಗಿರುತ್ತದೆ. ಅದರಂತೆ ವಾರ್ಡ್ ಕಾರ್ಯಕ್ರಮಗಳ ಪಟ್ಟಿಗೆ ಅನುಮೋದನೆಯನ್ನು ಪಡೆಯಲು ಕಡತವನ್ನು ಅನುಮೋದನೆಗಾಗಿ ಕಡತವನ್ನು ಸಲ್ಲಿಸಲಾಗಿರುತ್ತದೆ.
3. ಪ್ರಸುತ್ತ ರಸ್ತೆ ಗುಂಡಿಗಳನ್ನು ಮುಚ್ಚುವ ಕೆಲಸ ಪ್ರಗತಿಯಲ್ಲಿದ್ದು, ಸಾರ್ವಜನಿಕರ ವಾರ್ಡ್ ರಸ್ತೆಗಳಲ್ಲಿ ಎಲ್ಲಿಯಾದರೂ ಸರಿ, ರಸ್ತೆ ಗುಂಡಿ ಕಂಡು ಬಂದಲ್ಲಿ, ಕೂಡಲೇ ವಾರ್ಡ್ ಕಛೇರಿಗೆ ತಿಳಿಸಲು ಮನವಿ ಮಾಡಲಾಯಿತು.

4. ವಿದ್ಯುತ್ (ಬೀದಿ ದೀಪಗಳ ನಿರ್ವಹಣೆ) ವಿಭಾಗ:

1. ಬೀದಿ ದೀಪಗಳ ನಿರ್ವಹಣೆ ಅತ್ಯಂತ ಪ್ರಮುಖವಾದ ಕೆಲಸವಾಗಿದ್ದು, ಬೀದಿ ದೀಪಗಳನ್ನು ಅದಷ್ಟು ಸುಸ್ಥಿತಿಯಲ್ಲಿಡುವುದು.
2. ವಾರ್ಡ್ ವ್ಯಾಪ್ತಿಯಲ್ಲಿ ಆಳವಡಿಸಲಾಗಿರುವ ಎಲ್.ಇ.ಡಿ ವಿದ್ಯುತ್ ದೀಪಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವುದರ ಬಗ್ಗೆ ಕ್ರಮವಹಿಸುವುದು.
3. ವಾರ್ಡ್ ಕಛೇರಿಯ ಆವರಣದಲ್ಲಿ ಒಂದು ವಿದ್ಯುತ್ ದೀಪವನ್ನು ಅಳವಡಿಸಬೇಕೆಂದು ತಿಳಿಸಲಾಯಿತು.

5. ಕಂದಾಯ ವಿಭಾಗ:

1. ವಾರ್ಡ್ ವ್ಯಾಪ್ತಿಯಲ್ಲಿನ ಕಂದಾಯ ಪಾವತಿಯನ್ನು ಬಾಕಿ ಉಳಿಸಿಕೊಂಡಿರುವ ಪ್ರಮುಖ ಸಂಸ್ಥೆಗಳನ್ನು ಗುರುತಿಸಿ ಇವುರುಗಳಿಂದ ಕಂದಾಯವನ್ನು ವಸೂಲಿ ಮಾಡಲು ಸೂಕ್ತ ಕ್ರಮಕೈಗೊಳ್ಳಲುವುದು.

6. ಜಲಮಂಡಳಿ ವಿಭಾಗ:

1. ರಸ್ತೆ ಡಾಂಬರೀಕರಣ ಮುಗಿದ ನಂತರ ಸ್ಯಾನಿಟರಿ ಚೇಂಬರ್‌ಗಳ ಮಟ್ಟವನ್ನು ರಸ್ತೆ ಮಟ್ಟಕ್ಕೆ ಸರಿಪಡಿಸುವುದು.
2. ಜಿಕೆವಿಕೆ ಬಡಾವಣೆಯಲ್ಲಿ ಕಾವೇರಿ ಕುಡಿಯುವ ನೀರಿನ ಸರಬರಾಜನ್ನು ಪಡೆಯಲು ಈಗಾಗಲೇ ಜಲಮಂಡಳಿಗೆ ಹಣವನ್ನು ಪಾವತಿ ಮಾಡಲಾಗಿದ್ದರೂ ಸಹಾ ನೀರು ಸರಬರಾಜನ್ನು ಮಾಡಿರುವುದಿಲ್ಲ, ಇದರ ಬಗ್ಗೆ ಕೂಡಲೇ ಕ್ರಮ ವಹಿಸಬೇಕೆಂದು ಮನವಿ ಮಾಡಲಾಯಿತು. ಅಲ್ಲದೆ ಮಿಸಿಂಗ್ ಲೈನ್ ಗಳ ಕೆಲಸವನ್ನು ನಿರ್ವಹಿಸಕೊಡಬೇಕೆಂದು ಮನವಿ ಮಾಡಿರುತ್ತಾರೆ. ಸದರಿ ವಿಷಯದ ಬಗ್ಗೆ ಮುಂದಿನ ವಾರದಲ್ಲಿ ಕ್ರಮವಹಿಸಲಾಗುವುದೆಂದು ತಿಳಿಸಿರುತ್ತಾರೆ.
3. ತಮ್ಮ ಇಲಾಖೆ ವತಿಯಿಂದ ರಸ್ತೆ ಅಗೆದರೆ ಅದನ್ನು ನಿಯಾಮಾನುಸಾರ ಸರಿಪಡಿಸುವುದು.

7. **ತೋಟಗಾರಿಕೆ:**

1. ಉದ್ಯಾನವನ ಗಳ ನಿರ್ವಹಣೆಯ ಗುತ್ತಿಗೆದಾರರಿಗೆ ನಿರ್ವಹಣಾ ಬಿಲ್ ನ್ನು ಸುಮಾರು 2 ವರ್ಷಗಳಿಂದ ಪಾವತಿ ಹಾಗದೆ ಇದ್ದು, ಇದರಿಂದ ಉದ್ಯಾನವನಗಳ ನಿರ್ವಹಣೆ ಕಷ್ಟವಾಗುತ್ತಿರವುದರ ಬಗ್ಗೆ ತೋಟಗಾರಿಕೆ ಅಧೀಕ್ಷಕರು ತಿಳಿಸಿದರು.
2. ಉದ್ಯಾನವನಗಳಲ್ಲಿ ಈಗಾಗಲೇ ನಿರ್ಮಿಸಿರುವ ಸಾರ್ವಜನಿಕರ ಶೌಚಾಲಯಗಳ ನಿರ್ವಹಣೆ ಕೆಲಸವನ್ನು ಘಣತ್ಯಾಜ್ಯಾ ನಿರ್ವಹಣೆ ವಿಭಾಗಕ್ಕೆ ಹಸ್ತಾಂತರಿಸಲು, ಕಡತವನ್ನು ಅಪರ ಆಯುಕ್ತರು, ಬಿಬಿಎಂಪಿ ರವರು ಮೂಲಕ ಕಳುಹಿಸಲಾಗಿರುತ್ತದೆ.

7. ಅರಣ್ಯ ಇಲಾಖೆ:-

1. ಅರಣ್ಯ ವಿಭಾಗದವರು ವಾರ್ಡ್ ಸಮಿತಿ ಸಭೆಗೆ ಹಾಜರಾಗಿರುವುದಲ್ಲ, ನೋಡೆಲ್ ಅಧಿಕಾರಿಯವರು ದೂರವಾಣಿ ಮೂಲಕ ಸಂಪರ್ಕಿಸಿ, ಪಂಪಾ ಬಡಾವಣೆ ಮತ್ತು ಅಮೃತನಗರ ಮಾರುತಿ ಪಾರ್ಮ್ ಹತ್ತಿರ ಪೂರ್ಣವಾಗಿ ಒಣಗಿಹೋಗಿರುವ ಮರಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ತೆರವುಮಾಡಬೇಕೆಂದು ಸೂಚಿಸಲಾಗಿರುತ್ತದೆ. ಸದರಿ ವಿಷಯ ಬಗ್ಗೆ ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಸೂಚಿಸಲಾಗಿದೆ.

N.D.
ಕಾರ್ಯದರ್ಶಿ
ವಾರ್ಡ್ 07